ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 976 (98) |
| ಸದಸ್ಯರ ಹೆಸರು | : | ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 27.12.2022. |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯ ನಿಡಗುಂದಿ ಪಟ್ಟಣ ಪಂಚಾಯಿತಿಯಲ್ಲಿ ಅವ್ಯವಹಾರಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಯಾವ ರೀತಿಯ ಅವ್ಯವಹಾರಗಳು ನಡೆದಿವೆ ಮತ್ತು ಯಾರು ಅವ್ಯವಹಾರ ಮಾಡಿರುತ್ತಾರೆ. (ವಿವರ ನೀಡುವುದು); | -ಬಂದಿದೆ-<br>ವಿಜಯಪುರ ಜಿಲ್ಲೆಯ ನಿಡಗುಂದಿ ಪಟ್ಟಣ ಪಂಚಾಯಿತಿಯ ಹಿಂದಿನ ಮುಖ್ಯಾಧಿಕಾರಿ ಶ್ರೀ.ಡಿ.ಎನ್. ತಹಶೀಲ್ದಾರ್, (ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರು 2019-20ನೇ ಸಾಲಿನ 14ನೇ ಹಣಕಾಸು ಯೋಜನೆಯಡಿ ಮಂಜೂರಾದ ಕ್ರಿಯಾ ಯೋಜನೆಯಲ್ಲಿ ವಾರ್ಡ್ ನಂ.02 ರಲ್ಲಿ ಬರುವ ಭೀಮಾಶಂಕರ ಗುಡಿಯಿಂದ ನಾಗಠಾಣರವರ ಮನೆವರೆಗೆ ಸಿ.ಸಿ.ರಸ್ತೆ ನಿರ್ಮಾಣ ಮಾಡುವುದಾಗಿ ಕಾಮಗಾರಿಗೆ ಅನುಮೋದನೆ ಪಡೆದುಕೊಂಡಿದ್ದು, ಪ್ರಸ್ತಾಪಿತ ಕಾಮಗಾರಿ ನಿರ್ವಹಿಸದೆ ತಾವು "ಶಹನೂರ ಪೆಂಡಾರಿ ಅವರ ಮನೆಯಿಂದ ಮಸೂತಿಯವರ ಮನೆಯವರೆಗೆ ಹಾಗೂ ಕಮಟಗಿರವರ ಮನೆಯಿಂದ ಹತ್ತರಕಿಹಾಳರವರ ಕಂಪೌಂಡವರೆಗೆ ಸಿ.ಸಿ.ರಸ್ತೆ ನಿರ್ಮಾಣ ಮಾಡಿ, ಸದರಿ ಬದಲಾದ ಕಾಮಗಾರಿಯ ಕ್ರಿಯಾ ಯೋಜನೆಗೆ ಸಕ್ಷಮ ಪ್ರಾಧಿಕಾರದಿಂದ ಮಂಜೂರಾತಿಯನ್ನು ಪಡೆದುಕೊಳ್ಳದೆ ಕಾಮಗಾರಿ ನಿರ್ವಹಣೆ ಮಾಡಿ ಬಿಲ್ ಪಾವತಿಸಿ ಕರ್ತವ್ಯಲೋಪ ಎಸಗಿರುತ್ತಾರೆ ಎಂಬುದಾಗಿ ವಿಜಯಪುರ ಜಿಲ್ಲಾಧಿಕಾರಿಗಳು ದಿ:24.09.2021 ರಂದು ಪೌರಾಡಳಿತ ನಿರ್ದೇಶನಾಲಯಕ್ಕೆ ವರದಿ ಮಾಡಿರುತ್ತಾರೆ. |
| (ಆ) | ಈ ಬಗ್ಗೆ ಜಿಲ್ಲಾಧಿಕಾರಿಗಳು, ವಿಜಯಪುರ ಇವರ ಶಿಫಾರಸ್ಸಿನನ್ವಯ ಸರ್ಕಾರ ಕೈಗೊಂಡ ಕ್ರಮಗಳೇನು? | ಜಿಲ್ಲಾಧಿಕಾರಿಗಳ ಶಿಸ್ತು ಪ್ರಸ್ತಾವನೆಯನ್ನು ಆಧರಿಸಿ ನಿರ್ದೇಶನಾಲಯದಿಂದ ಶ್ರೀ.ಡಿ.ಎನ್.ತಹಶೀಲ್ದಾರ್, (ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಜಾರಿಗೊಳಿಸಿ, ಪ್ರಕರಣದ ಸತ್ಯಾಸತ್ಯತೆ ಪರಾಮರ್ಶೆಗಾಗಿ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ನಿರ್ದೇಶನಾಲಯದ ದಿ:20.05.2022 ರ ಆದೇಶದಲ್ಲಿ ನಿವೃತ್ತ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ. ವಿಚಾರಣಾಧಿಕಾರಿಗಳು ವಿಚಾರಣೆಯನ್ನು ಪೂರ್ಣಗೊಳಿಸಿ ತಮ್ಮ ವರದಿಯನ್ನು ಶಿಸ್ತು ಪ್ರಾಧಿಕಾರಕ್ಕೆ ದಿ:12.12.2022 ರಂದು ಸಲ್ಲಿಸಿರುತ್ತಾರೆ. ವಿಚಾರಣಾ ವರದಿಯ ಮೇಲೆ ಆಪಾದಿತ ನೌಕರನಿಗೆ ದಿನಾಂಕ 14.12.2022ರಂದು2ನೇ ಕಾರಣ ಕೇಳಿ ನೋಟೀಸ್ ಜಾರಿ ಮಾಡಲಾಗಿರುತ್ತದೆ. ಸದರಿಯವರು ಸಲ್ಲಿಸುವ ಲಿಖಿತ ಹೇಳಿಕೆಯನ್ನು ಶಿಸ್ತು ಪ್ರಾಧಿಕಾರವು ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲಾಗುವುದು. |

ಸಂಖ್ಯೆ:ನಅಇ 11 ಎಲ್‌ಸಿಕ್ಯೂ 2022

(ಎನ್.ನಾಗರಾಜು ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ
ವಲಯ ಉದ್ಯಮಗಳ ಸಚಿವರು.